# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 150(98)
ಮಾನ್ಯ ಸದಸ್ಯರ ಹೆಸರು: ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ಸಚಿವರು: ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು
ಉತ್ತರಿಸಬೇಕಾದ ದಿನಾಂಕ: 11.08.2025

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 2022ನೇ ಸಾಲಿನಲ್ಲಿ 15000 GPSTR ನೇಮಕಾತಿಯಲ್ಲಿ ಕಲ್ಯಾಣ ಕರ್ನಾಟಕ ಭಾಗದ 59 ಅಭ್ಯರ್ಥಿಗಳ ನೇಮಕಾತಿ ಆದೇಶ ನೀಡದಿರಲು ಕಾರಣಗಳೇನು: (ಮಾಹಿತಿ ನೀಡುವುದು). | 2022ನೇ ಸಾಲಿನ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಯ 371ಜೆ ಮೀಸಲಾತಿ ಕುರಿತಂತೆ ಸುತ್ತೋಲೆ ಸಂಖ್ಯೆ: ಸಿಆಸುಇ 03 ಹೈಕಕೋ 2019 ದಿ:01/02/2023ರಂತೆ ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸಿದ್ದರಿಂದ ಆಯ್ಕೆಯಿಂದ ಹೊರಗುಳಿದ ಕಲ್ಯಾಣ ಕರ್ನಾಟಕೇತರ ಅಭ್ಯರ್ಥಿಗಳು ಗೌರವಾನ್ವಿತ ಉಚ್ಚ ನ್ಯಾಯಾಲಯ ಬೆಂಗಳೂರು ಇಲ್ಲಿ ರಿಟ್ ಅರ್ಜಿ ಸಂಖ್ಯೆ: 23162/2023 ಮತ್ತು ಸಂಬಂಧಿತ ಪ್ರಕರಣಗಳು, ಕಲಬುರಗಿ ಪೀಠದಲ್ಲಿ W.P.No.200441/2024 ಮತ್ತು ಸಂಬಂಧಿತ ಪ್ರಕರಣಗಳಲ್ಲಿ ದಾವೆ ಹೂಡಿರುತ್ತಾರೆ. ಅಂತೆಯೇ ಮಾನ್ಯ ಕೆ.ಎ.ಟಿ ಬೆಳಗಾವಿ ಇಲ್ಲಿ ದಾಖಲಾಗಿದ್ದ ಅರ್ಜಿ ಸಂಖ್ಯೆ:10445-46/2023 ಮತ್ತು ಸಂಬಂಧಿತ ಪ್ರಕರಣಗಳಲ್ಲಿನ ದಿನಾಂಕ:06/03/2024ರ ತೀರ್ಪಿನ ವಿರುದ್ಧ ಇಲಾಖೆಯು ಗೌರವಾನ್ವಿತ ಉಚ್ಚನ್ಯಾಯಾಲಯ ಧಾರವಾಡ ಪೀಠದಲ್ಲಿ W.P.No.105925/2025 ಮೇಲ್ಮನವಿ ಸಲ್ಲಿಸಿದೆ. 371ಜೆ ಮೀಸಲಾತಿ ಕುರಿತಾಗಿ ಈ ಮೇಲ್ಕಂಡ ಪ್ರಕರಣಗಳು ಇತ್ಯರ್ಥಕ್ಕೆ ಬಾಕಿ ಇರುವುದರಿಂದ ಸದರಿ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲು ಸಾಧ್ಯವಾಗಿರುವುದಿಲ್ಲ. |
| ಆ) | ಕಲ್ಯಾಣ ಕರ್ನಾಟಕ ಭಾಗದ 59 ಅಭ್ಯರ್ಥಿಗಳನ್ನು 371 ಜೆ ಕೇಸ್ ವಿಚಾರವಾಗಿ ತಡೆಹಿಡಿಯಲು ಕಾರಣಗಳೇನು; | ಗೌರವಾನ್ವಿತ ಉಚ್ಚ ನ್ಯಾಯಾಲಯ ಬೆಂಗಳೂರು ಇಲ್ಲಿ ರಿಟ್ ಅರ್ಜಿ ಸಂಖ್ಯೆ:23162/2023 ಮತ್ತು ಸಂಬಂಧಿತ ಪ್ರಕರಣಗಳಲ್ಲಿ ತಡೆಯಾಜ್ಞೆ ಇರುವುದರಿಂದ ಹಾಗೂ ಮಾನ್ಯ ಉಚ್ಚ ನ್ಯಾಯಾಲಯ ಕಲಬುರಗಿ ಮತ್ತು ಧಾರವಾಡ ಪೀಠಗಳಲ್ಲಿ ಇದೇ ವಿಷಯದ ಪ್ರಕರಣಗಳು ಇತ್ಯರ್ಥಕ್ಕೆ ಬಾಕಿ ಇರುವುದರಿಂದ ಸದರಿ ಅಭ್ಯರ್ಥಿಗಳ ನೇಮಕಾತಿಯನ್ನು ತಡೆಹಿಡಿಯಲಾಗಿರುತ್ತದೆ. |
| ಇ) | ಈ ಅಭ್ಯರ್ಥಿಗಳಿಗೆ ಆದೇಶ ನೀಡಲು ಇಲ್ಲಿಯವರೆಗೆ ಯಾವ-ಯಾವ ರೀತಿ ಕಾನೂನು ಕ್ರಮಗಳನ್ನು | ಈ ಸಂಬಂಧ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ಎಲ್ಲಾ ಪ್ರಕರಣಗಳಲ್ಲಿ ಇಲಾಖೆಯ ಪರವಾಗಿ ಆಕ್ಷೇಪಣಾ ಹೇಳಿಕೆಗಳನ್ನು ಮತ್ತು ಅಗತ್ಯ |

| | | |
|---|---|---|
| | ತೆಗೆದುಕೊಳ್ಳಲಾಗಿದೆ: | ದಾಖಲೆಗಳನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿದ್ದು, ಅನುಪಾಲನೆ ಮಾಡಲಾಗುತ್ತಿದೆ. |
| ಈ) | WP 1464/2024 ಇತರೆ ಎಲ್ಲಾ ಸಂಬಂಧಿಸಿದ ಕೇಸ್‌ಗಳಿಗೆ ಷರತ್ತು ಬದ್ಧ ಆದೇಶ ಪ್ರತಿಯನ್ನು ನೀಡಲಾಗಿದೆ; ಆದರೆ, ಕಲ್ಯಾಣ ಕರ್ನಾಟಕ ಭಾಗದ 59 ಅಭ್ಯರ್ಥಿಗಳಿಗೆ ಮಾತ್ರ ನೀಡದಿರಲು ಕಾರಣಗಳೇನು; | ಗೌರವಾನ್ವಿತ ಉಚ್ಚ ನ್ಯಾಯಾಲಯ ಬೆಂಗಳೂರು ಇಲ್ಲಿ ರಿಟ್ ಅರ್ಜಿ ಸಂಖ್ಯೆ: 23162/2023 ಮತ್ತು ಸಂಬಂಧಿತ ಪ್ರಕರಣಗಳಲ್ಲಿ ತಡೆಯಾಜ್ಞೆ ಇರುವುದರಿಂದ ಹಾಗೂ ಮಾನ್ಯ ಉಚ್ಚ ನ್ಯಾಯಾಲಯ ಕಲಬುರಗಿ ಮತ್ತು ಧಾರವಾಡ ಪೀಠಗಳಲ್ಲಿ ಇದೇ ವಿಷಯದ ಪ್ರಕರಣಗಳು ಇತ್ಯರ್ಥಕ್ಕೆ ಬಾಕಿ ಇರುವುದರಿಂದ ಸದರಿ ಅಭ್ಯರ್ಥಿಗಳ ನೇಮಕಾತಿಯನ್ನು ತಡೆಹಿಡಿಯಲಾಗಿರುತ್ತದೆ. |
| ಉ) | ಯಾವ ಕಾಲಮಿತಿಯೊಳಗೆ ಈ ಅಭ್ಯರ್ಥಿಗಳಿಗೆ ಆದೇಶ ಪ್ರತಿ ನೀಡಲಾಗುತ್ತದೆ? | ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣಗಳಲ್ಲಿ ಮಾನ್ಯ ನ್ಯಾಯಾಲಯವು ನೀಡುವ ಅಂತಿಮ ತೀರ್ಪಿನ್ನು ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸಲಾಗುವುದು. |

**ಇಪಿ 73 ಪಿಎಂಎ 2025**

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು